**ಓ.ಎಸ್.ನಂಃ 56/2023**

**ಡಿಡಬ್ಲ್ಯೂ-2**

**<u>ಸಾಕ್ಷಿಯನ್ನು ಕರೆಯಿಸಿ ದಿನಾಂಕಃ 04.02.2026 ರಂದು ಪ್ರಮಾಣೀಕರಿಸಲಾಯಿತು.</u>**

**<u>ಪಾಟೀ ಸವಾಲು: ವಾದಿ ಪರ ವಕೀಲರಿಂದಃ</u>**

ನನ್ನ ಪ್ರಮಾಣ ಪತ್ರದಲ್ಲಿ ಬರೆದಿರುವ ವಿಷಯ ನನಗೆ ಗೊತ್ತು. ಮಲ್ಲಳ್ಳಿ ಬಸಪ್ಪನ ಮಕ್ಕಳು ಮಾಡಿಕೊಂಡಿರುವ ವಿಭಾಗ ಪತ್ರವನ್ನು ನಾನು ನೋಡಿಲ್ಲ. ದಾವಾ ಸ್ವತ್ತಿನ ಚೆಕ್ಕುಬಂದಿಯ ದಾಖಲೆಯನ್ನು ನಾನು ನೋಡಿಲ್ಲ, ಆದರೆ ಪ್ರತಿವಾದಿ ಅಲ್ಲಿ ವಾಸವಿದ್ದಾರೆ. ದಾವಾ ಸ್ವತ್ತು ಪ್ರತಿವಾದಿಗಳಿಗೆ ಸೇರಿದ್ದು ಎಂಬ ಬಗ್ಗೆ ನಾನು ಇ-ಸ್ವತ್ತನ್ನು ನೋಡಿದ್ದೇನೆ. ದಾವಾ ಸ್ವತ್ತು ಪ್ರತಿವಾದಿಗಳಿಗೆ ಸೇರಿದ್ದು ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಸ್ವತ್ತು ವಾದಿಗಳ ಮಾಲೀಕತ್ವಕ್ಕೆ ಒಳಪಟ್ಟಿದ್ದರು ಪ್ರತಿವಾದಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಸ್ವತ್ತು ಮತ್ತು ಪ್ರತಿವಾದಿಗಳ ಸ್ವತ್ತು ಬೇರೆ ಬೇರೆ ಎಂದರೆ ಸರಿಯಲ್ಲ. ದಾವಾ ಸ್ವತ್ತಿಗಳ ಬಗ್ಗೆ ನನಗೆ ಯಾವುದೆ ಮಾಹಿತಿ ಇಲ್ಲ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ವಾದಿಗಳ ಸ್ವತ್ತು ಸರ್ವೇ ನಂಬರ್ ಗೆ ಒಳಪಡುತ್ತದೆ ಮತ್ತು ಪ್ರತಿವಾದಿಗಳ ಸ್ವತ್ತು ಅಸೆಸ್ಮೆಂಟ್ ಸಂಖ್ಯೆಯಲ್ಲಿ ನಮೂದಾಗಿದೆ ಎಂದು ನುಡಿಯುತ್ತಾರೆ.

**ಮರು ವಿಚಾರಣೆ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

**(ಗಿರೀಶ ಆರ್.ಬಿ)**

ಒಂದನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ

ಗುಂಡ್ಲುಪೇಟೆ